ದಿನಾಂಕ : DATE: 12/3/2020

ಪತ್ರಿಕೆಯ ಹೆಸರು : NAME OF THE NEWS PAPER:

# ರಮೇಶ್ ಕುಮಾರ್ ಅಮಾನತಿಗೆ ಪಟ್ಟು

ಉ ವಾ. 12/3/20

## ಸಚಿವರು, ಶಾಸಕರಿಂದ ವಿಧಾನಸಭಾಧ್ಯಕ್ಷರಿಗೆ ಮನವಿ | ಮಾಜಿ ಸ್ಪೀಕರ್ ವಿರುದ್ಧ ಕ್ರಮಕ್ಕೆ ಆಗ್ರಹ

**ವಿಧಾನಮಂಡಲ:** ಮಾಜಿ ವಿಧಾನಸಭಾಧ್ಯಕ್ಷ ಕೆ.ಆರ್. ರಮೇಶ್ ಕುಮಾರ್ ಅವರು ಸಚಿವ ಡಾ.ಕೆ. ಸುಧಾಕರ್ ಅವರನ್ನು ಸದನದಲ್ಲಿ ಅವಹೇಳನಕಾರಿಯಾಗಿ ನಿಂದಿಸಿದ್ದು, ನಿಯಮಾನುಸಾರ ಕ್ರಮ ಕೈಗೊಂಡು ಅವರನ್ನು ಈ ಅಧಿವೇಶನ ಮುಗಿಯುವವರೆಗೆ ಅಮಾನತಿನಲ್ಲಿಡಬೇಕು ಎಂದು ಕೋರಿ ಹಲವು ಬಿಜೆಪಿ ಶಾಸಕರು ವಿಧಾನಸಭಾಧ್ಯಕ್ಷರಿಗೆ ಮನವಿ ಸಲ್ಲಿಸಿದ್ದಾರೆ.



ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮ 363ರಡಿ ರಮೇಶ್ ಕುಮಾರ್ ವಿರುದ್ಧ ಕ್ರಮ ಜರುಗಿಸುವಂತೆ ಸ್ಪೀಕರ್‌ಗೆ ಮನವಿ ಮಾಡಲಾಗಿದೆ. ಮನವಿ ಪತ್ರಕ್ಕೆ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ, ಸಚಿವರಾದ ಕೆ.ಎಸ್.ಈಶ್ವರಪ್ಪ ಬಿ.ಶ್ರೀರಾಮುಲು, ಜಗದೀಶ ಶೆಟ್ಟರ್, ಮಾಜಿ ಸ್ಪೀಕರ್ ಕೆ.ಜಿ.ಬೋಪಯ್ಯ, ಶಾಸಕರಾದ ವಿ.ಸುನೀಲ್ ಕುಮಾರ್, ಕುಮಾರ್ ಬಂಗಾರಪ್ಪ, ದೊಡ್ಡನಗೌಡ ಪಾಟೀಲ್, ರೂಪಾಲಿ ನಾಯಕ್, ಹರೀಶ್ ಪೂಂಜಾ, ಉಮಾನಾಥ ಕೋಟ್ಯಾನ್, ಸಿದ್ದು ಸವದಿ, ಸಂಜೀವ್ ಮಠಂದೂರು ಅವರು ಸಹಿ ಮಾಡಿದ್ದಾರೆ.

**ಮನವಿಯ ಸಾರಾಂಶ ಹೀಗಿದೆ:** ಮಂಗಳವಾರ ಮಧ್ಯಾಹ್ನ ವಿಧಾನಸಭೆಯ ಕಲಾಪದಲ್ಲಿ ಸಂವಿಧಾನ ಕುರಿತ ಚರ್ಚೆ ವೇಳೆ ಡಾ.ಕೆ.ಸುಧಾಕರ್ ಅವರು ಮಾತನಾಡುತ್ತಿದ್ದಾಗ ರಮೇಶ್ ಕುಮಾರ್ ಹಾಗೂ ಇತರರು ಪದೇ ಪದೆ ಅಡ್ಡಿಪಡಿಸುತ್ತಿದ್ದರು. ಅದನ್ನು ಲೆಕ್ಕಿಸದೆ ಸಚಿವರು ಮಾತನಾಡುತ್ತಾ ಸಂದರ್ಭೋಚಿತವಾಗಿ ಶಾಸಕರ ಅನರ್ಹತೆ ಹಾಗೂ ರಾಜೀನಾಮೆ ಬಗ್ಗೆ ಸುಪ್ರೀಂ ತನ್ನ ಆದೇಶದಲ್ಲಿ ಉಲ್ಲೇಖಿಸಿರುವ ಕೆಲ ಅಂಶ, ಪ್ಯಾರಾವನ್ನು ಉಲ್ಲೇಖಿಸುತ್ತಿದ್ದರು. ಆಗ ಏಕಾಏಕಿ ಆವೇಶಭರಿತರಾಗಿ ಸುಪ್ರೀಂ ಕೋರ್ಟ್‌ನ ಆದೇಶದ ಬಗ್ಗೆ ಇಲ್ಲಿ ಉಲ್ಲೇಖ ಮಾಡುವಂತಿಲ್ಲ ಎಂದು ರಮೇಶ್ ಕುಮಾರ್ ಹೇಳಿದರು.

ಅದಕ್ಕೆ ಸುಧಾಕರ್ ಪ್ರತಿಕ್ರಿಯಿಸಿ, ಉಲ್ಲೇಖಿಸುವ ಅಧಿಕಾರವಿದೆ ಎಂದರು. ಇದಕ್ಕೆ ರಮೇಶ್ ಕುಮಾರ್ ಅವರು ಅವಾಚ್ಯ ಶಬ್ದಗಳಿಂದ ನಿಂದಿಸುತ್ತಾ ಏಕಾಏಕಿ ಸದನದ ಬಾವಿಗೆ ಬಂದು ಏಕವಚನದಲ್ಲಿ 'ನೀನು ಯಾವನೋ.. ನಿನ್ನ ಎಲ್ಲಾ ಹಣೆಬರಹ ಗೊತ್ತು...' ಎನ್ನುತ್ತಾ ಇನ್ನಷ್ಟು ಅಸಂವಿಧಾನಿಕ ಅವಾಚ್ಯ ಶಬ್ದಗಳನ್ನು ಪ್ರಯೋಗಿಸಿದ್ದಾರೆ. ಈ ಸಂದರ್ಭದಲ್ಲಿ ಸದನದಲ್ಲಿ ಗದ್ದಲ ಉಂಟಾಗಿ ಪೀಠದಲ್ಲಿ ಆಸೀನರಾಗಿದ್ದ ಸಭಾಧ್ಯಕ್ಷರು ಸದನವನ್ನು ಕೆಲ ಸಮಯ ಮುಂದೂಡಿದರು. ರಮೇಶ್ ಕುಮಾರ್ ಅವರ ವರ್ತನೆ, ಅಸಂಸದೀಯ ಪದಗಳ ಬಳಕೆಯಿಂದ ಕೇವಲ ಸಚಿವರಿಗಷ್ಟೇ ಅವಮಾನವಾಗದೆ, ಇಡೀ ಸದನ ಹಾಗೂ ಎಲ್ಲಾ ಶಾಸಕರಿಗೂ ಅವಮಾನವಾಗಿದೆ. ಈ ಘಟನೆಯು ಕರ್ನಾಟಕ ವಿಧಾನಸಭೆಗೆ ಒಂದು ಕಪ್ಪು ಚುಕ್ಕೆಯಾಗಿದೆ. ಇಂತಹ ಘಟನೆ ಪುನರಾವರ್ತನೆಯಾಗುವುದನ್ನು ತಪ್ಪಿಸಲು ಈ ಘಟನೆಗೆ ಕಾರಣಕರ್ತರಾದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು.

ಇದನ್ನು ಗಂಭೀರವಾಗಿ ಪರಿಗಣಿಸಿ, ಈ ರೀತಿಯ ಅವಾಚ್ಯ ಶಬ್ದಗಳನ್ನು ಬಳಸಿದ ರಮೇಶ್ ಕುಮಾರ್ ಅವರನ್ನು ಈ ಅಧಿವೇಶನ ಮುಕ್ತಾಯವಾಗುವವರೆಗೆ ಅಮಾನತ್ತಿನಲ್ಲಿ ಇಡಬೇಕು ಎಂದು ಮನವಿ ಮಾಡುತ್ತಿದ್ದೇವೆ.

## 'ನೀನು ಬೇಡ, ನಿನ್ನ ಮುಖವಿರುವ ನೋಟು ಬೇಕು!'

**ವಿಧಾನ ಪರಿಷತ್ತು:** 'ಸ್ವತಃ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಈಗ ಚುನಾವಣಾ ಕಣಕ್ಕಿಳಿದು ಪ್ರಚಾರಕ್ಕೆ ಹೋದರೆ, 'ನೀನು ಬೇಡ ನಿನ್ನ ಮುಖ ಇರುವ ನೋಟು ಬೇಕು' ಎಂದು ಕೇಳುವಂತಹ ವಾತಾವರಣವನ್ನು ನಾವು ಸೃಷ್ಟಿಸಿದ್ದೇವೆ' ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಸಿ.ಟಿ. ರವಿ ಬೇಸರ ವ್ಯಕ್ತಪಡಿಸಿದರು.

ಮೇಲ್ಮನೆಯಲ್ಲಿ ಮಂಗಳವಾರ ಸಂವಿಧಾನದ ಮೇಲಿನ ವಿಶೇಷ ಚರ್ಚೆಯಲ್ಲಿ ಮಾತನಾಡಿ, 'ನಾವು ಚಿಕ್ಕವರಿದ್ದಾಗ ಚುನಾವಣೆಯಲ್ಲಿ ಯಾರಾದರೂ ನಿರ್ದಿಷ್ಟ ಪ್ರದೇಶಗಳಲ್ಲಿ ಬ್ಯಾಕೆಟ್ ಹಂಚಿದರೆ ದೊಡ್ಡ ಸುದ್ದಿಯಾಗುತ್ತಿತ್ತು. ಈಗ ಚುನಾವಣೆಯಲ್ಲಿ ಹಣ, ಹೆಂಡ ಇಲ್ಲದಿದ್ದರೆ ಮತದಾರರು ಕೈ-ಬಾಯಿ ನೋಡುವಂತಹ ಸ್ಥಿತಿ ನಿರ್ಮಾಣವಾಗಿದೆ. ಇಂದು ಗಾಂಧೀಜಿಯೇ ಚುನಾವಣೆಯಲ್ಲಿ ಸ್ಪರ್ಧಿಸಿದರೆ, ಅವರು ಕೂಡ ಸೋಲುತ್ತಾರೆ' ಎಂದು ಹೇಳಿದರು.

ಒಂದು ವೇಳೆ ಗಾಂಧೀಜಿ ಪ್ರಚಾರಕ್ಕೆ ಹೋದರೆ, ನೀನು ಬೇಡ ನಿನ್ನ ಮುಖ ಇರುವ ನೋಟು ಬೇಕು ಎಂದು ಹೇಳುತ್ತಾರೆ. ಇಂದಿನ ಈ ಸ್ಥಿತಿಗೆ ನಾವೆಲ್ಲರೂ ಹೊಣೆ ಎಂದು ಬೇಸರ ವ್ಯಕ್ತಪಡಿಸಿದರು.



ಇದಕ್ಕೂ ಮುನ್ನ ಜೆಡಿಎಸ್‌ನ ಶ್ರೀಕಂಠೇಗೌಡ ಮಾತನಾಡಿ, 'ಇತ್ತೀಚೆಗೆ ನಡೆದ ಕೆ.ಆರ್.ಪೇಟೆ ಉಪ ಚುನಾವಣೆಯಲ್ಲಿ ಹಣದ ಹೊಳೆಯೇ ಹರಿಯಿತು. ಒಂದು ಕುಟುಂಬಕ್ಕೆ ಹತ್ತು ಸಾವಿರ ನೀಡಿದರೆ, ಐದು ವೋಟು ಮತ್ತು ಐದು ಸಾವಿರ ನೀಡಿದರೆ ಮೂರು ವೋಟು ಎಂದು ಫಿಕ್ಸ್ ಮಾಡಿ, ಹಣ ಹಂಚಿಕೆ ಮಾಡಲಾಗಿದೆ' ಎಂದು ಚರ್ಚೆಗೆ ನಾಂದಿ ಹಾಡಿದರು. ಆಡಳಿತ ಪಕ್ಷದ ಸದಸ್ಯರು, 'ಮಂಡ್ಯ-ಹಾಸನದಲ್ಲಿ ಎಷ್ಟು ಹಣ ಹರಿದಿದೆ' ಎಂದು ಪ್ರಶ್ನಿಸಿದರು.

ತಿರುಗೇಟು ನೀಡಿದ ಜೆಡಿಎಸ್‌ನ ರಮೇಶ್ ಗೌಡ, ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಕಗ್ಗೊಲೆ ಮಾಡಿದ ಕೀರ್ತಿ ಬಿಜೆಪಿಗೆ ಸಲ್ಲುತ್ತದೆ. ಮಂಡ್ಯ ಉಪ ಚುನಾವಣೆಯಲ್ಲಿ ಗೆಲ್ಲಲು ನೀವು ಎಷ್ಟು ಹಣ ಹಂಚಿದ್ದೀರಿ ಎಂಬುದನ್ನು ಬಹಿರಂಗಪಡಿಸಿ ಎಂದರು.

ಮಧ್ಯಪ್ರವೇಶಿಸಿದ ಸಿ.ಟಿ. ರವಿ, ಎಲ್ಲರೂ ಸೇರಿ ಚುನಾವಣಾ ವ್ಯವಸ್ಥೆಯನ್ನು ಭ್ರಷ್ಟಗೊಳಿಸಿದ್ದೇವೆ. ಗಾಂಧೀಜಿ ಸ್ಪರ್ಧಿಸಿದರೂ ಅವರು ಕೂಡ ಸೋಲುತ್ತಾರೆ ಎಂದು ಸಮಜಾಯಿಷಿ ನೀಡಿದರು.